**ಪಶ್ಚಿಮ ವಲಯ ವ್ಯಾಪ್ತಿಯ, ಮಲ್ಲೇಶ್ವರಂ ಉಪವಿಭಾಗದ ಕಾಡುಮಲ್ಲೇಶ್ವರ ವಾರ್ಡ್-65ರಲ್ಲಿ ಆನ್‌ಲೈನ್ (Zoom App) ಮೂಲಕ ದಿನಾಂಕ: 20-03-2021 ರಂದು, ನಡೆದ ವಾರ್ಡ್ ಸಮಿತಿ ಸಭೆಯ**

## ಸಭಾ ನಡವಳಿಗಳು.

**ವಾರ್ಡ್ ಸಂಖ್ಯೆ-65 ಕಾಡುಮಲ್ಲೇಶ್ವರ** **ಸಮಯ ಬೆಳಿಗ್ಗೆ 11:00 ಘಂಟೆಗೆ**

ದಿನಾಂಕ: 20-03-2021 ರಂದು ವಾರ್ಡ್ ಸಂಖ್ಯೆ:65ರ ಮಾರ್ಚ್ ಮಾಹೆಯ ವಾರ್ಡ್ ಸಮಿತಿ ಸಭೆಯು ನಡೆಯಿತು. ಸದರಿ ಸಭೆಯಲ್ಲಿ ವಾರ್ಡ್ ಸಮಿತಿ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಆನ್‌ಲೈನ್ (Zoom App) ಮೂಲಕ ಭಾಗವಹಿಸಿದ್ದರು. ವಾರ್ಡ್ ಸಂಖ್ಯೆ: 65ರ ಸಹಾಯಕ ಅಭಿಯಂತರರು ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದು ಎಲ್ಲರಿಗೂ ಸ್ವಾಗತವನ್ನು ಕೋರಿದರು ಹಾಗೂ ಸದಸ್ಯರುಗಳೆಲ್ಲರ ಕಿರು ವಿವರ ತಿಳಿಸಿ. ಮಾಸ್ಕ್ ಧರಿಸಿ ಸಾಮಾಜಿಕ ಅಂತರ ಕಾಯ್ದುಕೊಂಡು ಸಭೆ ನಡೆಸಲು ಕೋರಿದರು.

ಸದರಿ ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

- ವಾರ್ಡ್-65 ಘನತ್ಯಾಜ್ಯ ಇಲಾಖೆಯವರು ಘನತ್ಯಾಜ್ಯವನ್ನು ತೆರವುಗೊಳಿಸುವ ಬಗ್ಗೆ ಸಾರ್ವಜನಿಕರು ಕೇಳಿರುವ ಪ್ರಶ್ನೆಗಳಿಗೆ ಘನತ್ಯಾಜ್ಯವನ್ನು ಸುರಿಸುವ ಸ್ಥಳದಲ್ಲಿ ಜಾಗವಿಲ್ಲದ ಕಾರಣ ಮುಂದಿನ ನಾಲ್ಕು ದಿನಗಳಲ್ಲಿ ಸ್ಥಳಾವಕಾಶ ಮಾಡಿಕೊಡುವುದಾಗಿ ತಿಳಿಸಿರುತ್ತಾರೆ. ಹಾಗೂ ವಾರ್ಡ್-65ರಲ್ಲಿ ಶೇಕಡ 50%ರಷ್ಟು ವಿಂಗಡಣೆಯಾಗುತ್ತಿರುತ್ತದೆ. ಹಾಗೂ ಬೇಸಿಗೆಯಲ್ಲಿ ಉದುರುವ ಮರದ ಎಲೆಗಳನ್ನು ಪ್ರತಿದಿನ ತೆಗೆಯುವುದಾಗಿ ತಿಳಿಸಿರುತ್ತಾರೆ. ಹಾಗೂ ಪ್ರತಿದಿನ ಹಸಿ ಮತ್ತು ಒಣ ಕಸವನ್ನು ತೆಗಿಯುತ್ತಿದ್ದು, ಅಪಾರ್ಟ್‌ಮೆಂಟ್‌ಗಳಲ್ಲಿ ಸೋಮವಾರ ಹಾಗೂ ಗುರುವಾದಂದು ತೆಗೆಯುವುದಾಗಿ ತಿಳಿಸಿದರು. ಮತ್ತು 11ನೇ ಮುಖ್ಯರಸ್ತೆಯಲ್ಲಿರುವ ಗೋಡೆಗೆ ಬಣ್ಣ ಬಳಿಯುವುದಾಗಿ ತಿಳಿಸಿದರು.

- ವಾರ್ಡ್-65 ಆರೋಗ್ಯ ಇಲಾಖೆಯ ಹಿರಿಯ ಆರೋಗ್ಯ ಪರಿವೀಕ್ಷರು ಸಭೆಯಲ್ಲಿ ಹಾಜರಿದ್ದು, ವಾರ್ಡಿನಲ್ಲಿ ಇದುವರೆವಿಗೂ 1243 ಕೋವಿಡ್-19 ಸೋಂಕಿಗೆ ಒಳಪಟ್ಟಿರುತ್ತಾರೆ. ಹಾಗೂ ಕೋವಿಡ್-19 ಸೋಂಕಿನಿಂದ 19 ಜನ ಮರಣ ಹೊಂದಿದ್ದು, 1206 ಜನ ಕೋವಿಡ್-19 ಸೋಂಕಿನಿಂದ ಗುಣಮುಖರಾಗಿ ಮನೆಗೆ ತೆರಳಿರುತ್ತಾರೆ. ಮತ್ತು ಕೋವಿಡ್-19 ಸೋಂಕಿತರು-18 ಹಾಗೂ 3077 ಜನ ಕೋವಿಡ್-19 ಸೋಂಕಿನ ಪ್ರಾಥಮಿಕ ಸಂಪರ್ಕ ಇರುವವರು ಮತ್ತು 1933 ದ್ವಿತೀಯ ಸಂಪರ್ಕದಲ್ಲಿರುವವರನ್ನು ಪತ್ತೆ ಮಾಡಲಾಗಿರುತ್ತದೆ. ಮತ್ತು 635 ಜನ ಹೋಂ ಕ್ವಾರೆಂಟೈನ್‌ನಲ್ಲಿ ಇರುವುದಾಗಿ ಹಾಗೂ ಆರೋಗ್ಯ ವೈದ್ಯಾಧಿಕಾರಿಗಳು ಮನೆ ಮನೆಗೆ ಔಷಧಿ ಸಿಂಪಡಣೆ ಮಾಡಲಾಗುತ್ತದೆ ಎಂದು ತಿಳಿಸಿದರು. ಹಾಗೂ ಸಾರ್ವಜನಿಕರು ವ್ಯಾಕ್ಸಿನೇಷನ್ ನೀಡುವ ಬಗ್ಗೆ ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿರುತ್ತಾರೆ.

Scanned with CamScanner

➢ ಬೃಹತ್ ನೀರು ಕಾಲುವೆಗಳ ಅಧಿಕಾರಿಗಳು ಸಭೆಯಲ್ಲಿ ಗೈರು ಹಾಜರಾಗಿರುತ್ತಾರೆ. 12ನೇ ಅಡ್ಡರಸ್ತೆಯಲ್ಲಿ ನಡೆಯುತ್ತಿರುವ ಕಾಲುವೆ ಕಾಮಗಾರಿಯು ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಕಾಮಗಾರಿಯು ಯಾವ ಸಮಯದಲ್ಲಿ ಮುಗಿಯುತ್ತದೆ ಎಂದು ಕೇಳಿದಾಗ ಬಿಬಿಎಂಪಿ ಇಂಜಿನಿಯರ್ ರವರು ಸಂಬಂಧಪಟ್ಟ ಇಲಾಖೆಯವರಿಗೆ ತಿಳಿಸುವುದಾಗಿ ಉತ್ತರಿಸಿರುತ್ತಾರೆ.

➢ ಬೆಂಗಳೂರು ನೀರು ಮತ್ತು ಒಳಚರಂಡಿ ಮಂಡಳಿಯ ಸಹಾಯಕ ಇಂಜಿನಿಯರ್ ರವರು ಗೈರು ಹಾಜರಾಗಿರುತ್ತಾರೆ. ವಾರ್ಡ್‌ನಲ್ಲಿ ನಡೆಯುತ್ತಿರುವ ಮ್ಯಾನ್‌ಹೋಲ್‌ಗಳಲ್ಲಿ ನಡೆಯುತ್ತಿರುವ ಕಾಮಗಾರಿಗಳ ಬಗ್ಗೆ ಹಾಗೂ ಅವಶೇಷಗಳನ್ನು (Debries) ತೆಗೆಯಬೇಕೆಂದು ಕೋರಿರುತ್ತಾರೆ. ಅದಕ್ಕೆ ಬಿಬಿಎಂಪಿ ಇಂಜಿನಿಯರ್ ರವರು ಸಂಬಂಧಪಟ್ಟ ಇಲಾಖೆಯವರಿಗೆ ತಿಳಿಸಿ (Debries)ನ್ನು ತೆಗೆಸುವುದಾಗಿ ಉತ್ತರಿಸಿರುತ್ತಾರೆ.

➢ ವಿದ್ಯುತ್ ಇಲಾಖೆಯವರು ಸಭೆಯ ಹಾಜರಿದ್ದು, ಯು.ಜಿ ಕೇಬಲ್ ಹಾಗೂ ಎ.ಬಿ ಕೇಬಲ್ ಬಗ್ಗೆ ಸಾರ್ವಜನಿಕರು ಕೇಳಿದ ಪ್ರಶ್ನೆಗಳಿಗೆ ಉತ್ತರಿಸುತ್ತಾ, ಕಾಮಗಾರಿಗಳನ್ನು ಒಂದು ತಿಂಗಳೊಳಗಾಗಿ ಮುಗಿಸುವುದಾಗಿ. ಸಭೆಗೆ ತಿಳಿಸಿರುತ್ತಾರೆ.

➢ ಮಾರ್ಗೋಸಾ ರಸ್ತೆಗಳಲ್ಲಿ ನಡೆಯುತ್ತಿರುವ ಟೆಂಡರ್ ಶ್ಯೂರ್ ಕಾಮಗಾರಿಯ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದು, ಕಾಮಗಾರಿಯ ಬಗ್ಗೆ ವಿವರವಾಗಿ ತಿಳಿಸಿ ಮುಂದಿನ ದಿನಗಳಲ್ಲಿ ಸಾರ್ವಜನಿಕರು, ಬಿಬಿಎಂಪಿ ಅಧಿಕಾರಿಗಳು ಹಾಗೂ ಸಂಚಾರಿ ಪೊಲೀಸ್ ಇಲಾಖಾ ಅಧಿಕಾರಿಗಳು ಪರಿವೀಕ್ಷಿಸಲು ಸಭೆಗೆ ತಿಳಿಸಿರುತ್ತಾರೆ.

➢ 11ನೇ ಮುಖ್ಯರಸ್ತೆ ಮತ್ತು 8ನೇ ಮುಖ್ಯರಸ್ತೆಯಲ್ಲಿ ಮೇಜರ್ ರಸ್ತೆ ಪಶ್ಚಿಮ ವಲಯದಿಂದ ಕಾಮಗಾರಿಗಳು ನಡೆಯುತ್ತಿದ್ದು, ಕಾಮಗಾರಿಗಳ ಬಗ್ಗೆ ಸಾರ್ವಜನಿಕರಿಗೆ ಬಿಬಿಎಂಪಿ ಇಲಾಖೆ ಸಹಾಯಕ ಅಭಿಯಂತರರು ಕಾಮಗಾರಿಯ ಬಗ್ಗೆ ತಿಳಿಸುತ್ತಾ ಹಾಗೂ ಪಾದಚಾರಿ ಮಾರ್ಗಗಳ ಬಗ್ಗೆ ಸಾರ್ವಜನಿಕರು ಕೇಳಿದ ಪ್ರಶ್ನೆಗಳಿಗೆ ಮುಂದಿನ ದಿನಗಳಲ್ಲಿ ಸಾರ್ವಜನಿಕರೊಂದಿಗೆ ಪರಿವೀಕ್ಷಿಸಲು ಸಭೆಗೆ ತಿಳಿಸಿರುತ್ತಾರೆ.

➢ ಅರಣ್ಯ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದು, ರಸ್ತೆಗಳ ಬೀದಿಬದಿಯಲ್ಲಿರುವ ಮರಗಳ ಕೊಂಬೆಗಳು ಬೀದಿದೀಪಗಳಿಗೆ ಅಡ್ಡವಾಗುತ್ತಿರುವುದರಿಂದ ಕೊಂಬೆಗಳನ್ನು ತೆಗೆಯಲು ಕೋರಿರುತ್ತಾರೆ. ಅದಕ್ಕೆ ಅರಣ್ಯ ಇಲಾಖೆಯವರು ಮರಗಳ ಕೊಂಬೆಗಳನ್ನು ಪರಿಶೀಲಿಸಿ ತೆರವುಗೊಳಿಸಲು ಕ್ರಮಕೈಗೊಳ್ಳುವುದಾಗಿ ಸಭೆಗೆ ತಿಳಿಸಿರುತ್ತಾರೆ.

➢ ವಾರ್ಡ್-65ರ ಸಭೆಗೆ ಸಹಾಯಕ ಅಭಿಯಂತರರು ಬೇರೆ ಇಲಾಖೆಯವರು ಕಾಮಗಾರಿಗಳನ್ನು ಮುಂದಿನ ತಿಂಗಳೊಳಗಾಗಿ ಪೂರ್ಣಗೊಳಿಸುವುದಾಗಿ ಹಾಗೂ ಬಿಬಿಎಂಪಿ ಇಲಾಖೆಯಿಂದ ರಸ್ತೆಗಳಿಗೆ ಡಾಂಬರ್ ಹಾಕುವುದು. ಪಾದಚಾರಿ ಮಾರ್ಗಗಳನ್ನು ಅಭಿವೃದ್ಧಿ ಪಡಿಸುವುದಾಗಿ ತಿಳಿಸಿರುತ್ತಾರೆ. ಹಾಗೂ ಎಲ್ಲಾ ಇಲಾಖಾ ಕಾಮಗಾರಿಗಳನ್ನು ಆದಷ್ಟು ಬೇಕೆ ಪೂರ್ಣಗೊಳಿಸುವುದಾಗಿ ತಿಳಿಸಿರುತ್ತಾರೆ.

**ಮಾನ್ಯ ಅಧ್ಯಕ್ಷರ ಅಪ್ಪಣೆ ಮೇರೆಗೆ ಕಾರ್ಯದರ್ಶಿಯವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.**

**ಕಾರ್ಯದರ್ಶಿ,**

29/3/24

**ಸಹಾಯಕ ಅಭಿಯಂತರರು, ವಾರ್ಡ್-65**
**ಮಲ್ಲೇಶ್ವರಂ ಉಪ ವಿಭಾಗ, ಬಿಬಿಎಂಪಿ**

Scanned with CamScanner